**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ.117/2022</u>**

| | | |
|---|---|---|
| ಸಾಕ್ಷಿದಾರರ ಹೆಸರು | : ಸಾತ್ವಿಕ್ | ಪ್ರಾಸಾ-8 |
| ತಂದೆಯ ಹೆಸರು | : ಮಣಿ | ಚಾಸಾ-2 |
| ವಯಸ್ಸು | : 29 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಮೆಕಾನಿಕ್ | ದಿನಾಂಕಃ 25.02.2026 |
| ವಾಸಸ್ಥಳ | : ಬಿಳಗುಳ | |

**<u>:ಮುಖ್ಯ ವಿಚಾರಣೆ: ಪ್ರಾಜ್ಞ್ಯಾ ಸ.ಸ.ಅ. ರವರಿಂದ:</u>**

ನ್ಯಾಯಾಲಯದ ಮುಂದಿರುವ 2 ನೇ ಆರೋಪಿಯ ಪರಿಚಯ ನನಗಿಲ್ಲ. ನ್ಯಾಯಾಲಯದ ಮುಂದೆ ವಿಡಿಯೋ ಕಾನ್ಪರೆನ್ಸ್ ನ ಮುಖಾಂತರ ಹಾಜರುಪಡಿಸಲಾದ 1 ನೇ ಆರೋಪಿಯ ಪರಿಚಯ ನನಗಿರುವುದಿಲ್ಲ. ಚಾಸಾ-1 ಮತ್ತು 3 ರಿಂದ 5 ರವರ ಪರಿಚಯ ನನಗಿಲ್ಲ.

ಸಾಕ್ಷಿಯು ನಿಪಿ-3 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ನಿಪಿ-4 ರಿಂದ 7 ರ ಪೋಟೋದಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-29 ಮತ್ತು 34 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-29(ಬಿ) ಮತ್ತು 34(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-30 ರಿಂದ 33, 35 ಮತ್ತು 36 ರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸುತ್ತಾರೆ.

ನಿಪಿ-3, 29 ಮತ್ತು 34 ರಲ್ಲಿ ಏನನ್ನು ಬರೆಯಲಾಗಿದ ಎಂಬ ವಿಷಯ ನನಗೆ ತಿಳಿದಿರುವುದಿಲ್ಲ ಮತ್ತು ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂಬುದರ ಬಗ್ಗೆ ತಿಳಿದಿರುವುದಿಲ್ಲ. ನಿಪಿ-30 ರಿಂದ 33 ಮತ್ತು 35 ಮತ್ತು 36 ನ್ನು ಯಾವ ಕಾರಣಕ್ಕಾಗಿ ತೆಗೆಯಲಾಗಿರುತ್ತದೆ ಎಂಬ ಮಾಹಿತಿ ನನಗಿರುವುದಿಲ್ಲ. ಸದರಿ ಸಮಯದಲ್ಲಿ ನನ್ನ ಮುಂದೆ ಯಾವ ವಸ್ತುಗಳನ್ನು ವಶಪಡಿಸಿಕೊಂಡ ಬಗ್ಗೆ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**<u>ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:</u>**

ಸಾಕ್ಷಿಗೆ ನಿಪಿ-3, 29 ಮತ್ತು 34 ರಲ್ಲಿ ನಮೂದಿಸಿರುವ ಅಂಶಗಳನ್ನು ಓದಿ ಹೇಳಲಾಗಿ ಸಾಕ್ಷಿಯು ಸದರಿ ಅಂಶಗಳನ್ನು ಸಂಪೂರ್ಣವಾಗಿ ಅಲ್ಲಗಳೆದಿರುತ್ತಾರೆ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

C/c ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.